ಜನರಿಕ್ ಔಷಧಿ ಮಳಿಗೆಗಳ ಸ್ಥಾಪನೆ

542(1161); ಡಾ॥ ಗುರುಪಾದಪ್ಪ ನಾಗಮಾರಪಳ್ಳಿ (ಬೀದರ್)

ಅ) ರಾಜ್ಯದ ವಿವಿಧ ಸ್ಥಳಗಳಲ್ಲಿ ಬಡವರಿಗೆ ಅನುಕೂಲ ಮಾಡಿಕೊಡುವ ಸಲುವಾಗಿ ಜನರಿಕ್ ಔಷಧಿ ಮಳಿಗೆಗಳನ್ನು ತೆರೆಯುವುದಾಗಿ ಈ ಹಿಂದಿನ ವರ್ಷಗಳಲ್ಲಿ ಸರ್ಕಾರ ಘೋಷಣೆ ಮಾಡಿರುವುದು ನಿಜವಲ್ಲವೆ;

ಆ) ಹಾಗಿದ್ದಲ್ಲಿ, ಇಲ್ಲಿಯವರೆವಿಗೆ ರಾಜ್ಯದ ಯಾವ ಯಾವ ಸ್ಥಳಗಳಲ್ಲಿ ಎಷ್ಟೆಷ್ಟು ಔಷಧಿ ಮಳಿಗೆಗಳನ್ನು ತೆರೆಯಲಾಗಿದೆ (ಮಳಿಗೆಗಳ ಪೂರ್ಣ ವಿವರಗಳನ್ನು ಒದಗಿಸುವುದು);

ಇ) ಇಲ್ಲಿಯವರೆಗೂ ತೆರೆಯದೇ ಇದ್ದಲ್ಲಿ ಕಾರಣಗಳೇನು; ಮತ್ತು ಯಾವಾಗ ಈ ಮಳಿಗೆಗಳನ್ನು ತೆರೆಯಲಾಗುವುದು;

ಈ) ಈ ಯೋಜನೆಯ ಅನುಷ್ಠಾನಕ್ಕಾಗಿ ಕಳೆದ ಎರಡು ವರ್ಷಗಳಿಂದ ಇಲ್ಲಿಯವರೆಗೆ ಎಷ್ಟು ಹಣವನ್ನು ಖರ್ಚು ಮಾಡಲಾಗಿದೆ (ವಿಧಾನಸಭಾ ಕ್ಷೇತ್ರವಾರು ವಿವರಗಳನ್ನು ಒದಗಿಸುವುದು)?

ಶ್ರೀ ಯು.ಟಿ. ಖಾದರ್ (ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ನಿಜ.

ಆ) ರಾಜ್ಯದಲ್ಲಿ 2 ಹಂತದಲ್ಲಿ ಜನರಿಕ್ ಔಷಧಿ ಮಳಿಗೆಗಳನ್ನು ತೆರೆಯಲು ಸರ್ಕಾರವು ಉದ್ದೇಶಿಸಿರುತ್ತದೆ.

1. ಪ್ರಥಮ ಹಂತದಲ್ಲಿ ಎಲ್ಲಾ ಜಿಲ್ಲೆಗಳಲ್ಲಿ ಪಿ.ಪಿ.ಪಿ ಮಾದರಿಯಲ್ಲಿ ಜನರಿಕ್ ಔಷಧಿ ಮಳಿಗೆಗಳನ್ನು ಸ್ಥಾಪಿಸಲು ಹೆಚ್.ಎಲ್.ಎಲ್ ಸಂಸ್ಥೆಯ ಜೊತೆ ಒಡಂಬಡಿಕೆಯನ್ನು ಮಾಡಿಕೊಳ್ಳಲಾಗಿದೆ. ಅದರನ್ವಯ ಹೊಸ ಕಟ್ಟಡಗಳು ನಿರ್ಮಾಣವಾಗುತ್ತಿವೆ. ಕೆ.ಸಿ. ಜನರಲ್ ಆಸ್ಪತ್ರೆಯ ಆವರಣದಲ್ಲಿ ಕಟ್ಟಡವು

ಶಂಕುಸ್ಥಾಪನೆಯಾಗಿದ್ದು, ಸದ್ಯದಲ್ಲಿಯೇ ಔಷಧಿ ಮಳಿಗೆಯು ಆರಂಭವಾಗುತ್ತದೆ.

2. ಎರಡನೇ ಹಂತದಲ್ಲಿ 2015–16ನೇ ಸಾಲಿನಿಂದ ಎಲ್ಲಾ ಆಸ್ಪತ್ರೆಗಳ ಬೇಡಿಕೆಗೆ ಅನುಗುಣವಾಗಿ ಅವಶ್ಯಕ ಔಷಧಿಯನ್ನು ಪೂರೈಸುವ ಯೋಜನೆಯು ಸರ್ಕಾರದ ಪರಿಶೀಲನೆಯಲ್ಲಿದೆ. ಇದರ ಜೊತೆಗೆ ರಾಜ್ಯದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮತ್ತು ವೈದ್ಯಕೀಯ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿನ 39 ಸರ್ಕಾರಿ ಆಸ್ಪತ್ರೆಗಳಲ್ಲಿ ಜನಸಂಜೀವಿನಿ ಎಂಬ ಜನರಿಕ್ ಮಳಿಗೆಗಳನ್ನು ಸ್ಥಾಪಿಸುವ ಕಾರ್ಯಕ್ರಮವು ಸರ್ಕಾರದ ಪರಿಶೀಲನೆಯಲ್ಲಿದೆ.

ಇ) 2014–15ನೇ ಸಾಲಿನಲ್ಲಿ ಒಡಂಬಡಿಕೆ ಮಾಡಿಕೊಳ್ಳಲು ವಿಳಂಬವಾಗಿದ್ದು, 2015–16ನೇ ಸಾಲಿಗೆ ಅನುದಾನದ ಲಭ್ಯತೆಯ ಮೇರೆಗೆ ಮಳಿಗೆಗಳನ್ನು ಸ್ಥಾಪಿಸಲು ಉದ್ದೇಶಿಸಲಾಗಿದೆ.

ಈ) ಈ ಸಂಬಂಧ ಯಾವುದೇ ಹಣವು ವೆಚ್ಚವಾಗಿರುವುದಿಲ್ಲ.

ರಾಜೀವ್ ಆರೋಗ್ಯ ಭಾಗ್ಯ ಮತ್ತು ಜ್ಯೋತಿ ಸಂಜೀವಿನಿ ಯೋಜನೆ

543(1162); ಡಾ॥ ಗುರುಪಾದಪ್ಪ ನಾಗಮಾರಪಳ್ಳಿ (ಬೀದರ್)

ಅ) ಬಡತನ ರೇಖೆಗಿಂತಲೂ ಮೇಲ್ಪಟ್ಟ ಕುಟುಂಬಗಳಿಗೆ ರಾಜೀವ್ ಆರೋಗ್ಯ ಭಾಗ್ಯ ಮತ್ತು ಸರ್ಕಾರಿ ನೌಕರರಿಗೆ ಜ್ಯೋತಿ ಸಂಜೀವಿನಿ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಿರುವುದು ನಿಜವಲ್ಲವೇ; ಈ ಯೋಜನೆಗಳ ವೈಶಿಷ್ಟ್ಯವೇನು;

ಆ) ಹಾಗಿದ್ದಲ್ಲಿ ಈ ಸಾಲಿನಲ್ಲಿ ಇದಕ್ಕಾಗಿ ಎಷ್ಟು ಹಣವನ್ನು ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ವೆಚ್ಚ ಮಾಡಲಾಗುವುದು;

ಇ) ಇಲ್ಲಿಯವರೆಗೆ ಪ್ರತಿ ವಿಧಾನಸಭಾ ಕ್ಷೇತ್ರದಲ್ಲಿ ಎಷ್ಟು ಜನರು ಇದರ ಪ್ರಯೋಜನವನ್ನು ಪಡೆದುಕೊಂಡಿದ್ದಾರೆ;